# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 29.10.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯ ವ್ಯಾಪ್ತಿಯ ಥಣಿಸಂದ್ರ ಗ್ರಾಮದ ಸರ್ವೆ ನಂ.75 ಮತ್ತು 77ರಲ್ಲಿ ಹಾದುಹೋಗುವ ರಾಜಕಾಲುವೆಯನ್ನು ಒತ್ತುವರಿ ಮಾಡಿಕೊಂಡು ಸುಮಾರು 12 ಮನೆಗಳನ್ನು ನಿರ್ಮಿಸಲಾಗಿತ್ತು. ಇಂದು ಪಾಲಿಕೆಯ ಬೃಹತ್ ನೀರುಗಾಲುವೆ ಕಾರ್ಯಪಾಲಕ ಅಭಿಯಂತರರಾದ ಶ್ರೀ ಬಿ.ಎಸ್.ಪ್ರಹ್ಲಾದ್ ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶ್ರೀ ರಾಘವೇಂದ್ರ ರವರ ನೇತೃತ್ವದಲ್ಲಿ ತಂಡಗಳನ್ನು ರಚಿಸಿ ಮನೆಗಳನ್ನು ಒಡೆದು ಹಾಕಿ, ರಾಜಕಾಲುವೆ ಒತ್ತುವರಿ ತೆರವುಗೊಳಿಸಲಾಯಿತು. ಬಿ.ಎಂ.ಟಿ.ಎಫ್. ಸಿಬ್ಬಂದಿ ಹಾಗೂ ಸ್ಥಳೀಯ ಪೋಲಿಸರ ಸಹಕಾರದೊಂದಿಗೆ ಕಾರ್ಯಾಚರಣೆ ನಡೆಸಲಾಯಿತು. ರಾಜಕಾಲುವೆ ತೆರವುಗೊಳಿಸುವ ಕಾರ್ಯ ತೀವ್ರಗೊಳಿಸಲು ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ರವರಿಗೆ ಪಾಲಿಕೆ ಆಯುಕ್ತರು ಸೂಚನೆ ನೀಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***<u>ಪತ್ರಿಕಾ ಪ್ರಕಟಣೆ</u>*** **ದಿನಾಂಕ: 29.10.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಾಜರಾಜೇಶ್ವರಿನಗರ ವಲಯದ ಶ್ರೀಗಂಧದ ಕಾವಲು ಪ್ರದೇಶದ ಸರ್ವೆ ನಂ.15ರಲ್ಲಿರುವ ಕೆರೆಯಲ್ಲಿ 1 ಎಕರೆ 28 ಗುಂಟೆ ಪ್ರದೇಶವನ್ನು ಒತ್ತುವರಿ ಮಾಡಿಕೊಂಡು, ಮನೆಗಳನ್ನು ಹಾಗೂ ಕಾಂಪೌಂಡ್‌ಗಳನ್ನು ನಿರ್ಮಿಸಲಾಗಿತ್ತು. ಇಂದು ಕಾರ್ಯಪಾಲಕ ಅಭಿಯಂತರರು (ಕೆರೆಗಳು) ವಿಭಾಗರವರು ಕಾರ್ಯಾಚರಣೆ ನಡೆಸಿ, 1 ಎಕರೆ 23 ಗುಂಟೆ ಪ್ರದೇಶದ ಒತ್ತುವರಿ ತೆರವುಗೊಳಿಸಿ, ಪಾಲಿಕೆಯ ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 29.10.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯ ವಾರ್ಡ್ ನಂ.160ರ ವ್ಯಾಪ್ತಿಯ ಐಡಿಯಲ್ ಹೋಮ್ಸ್ ಬಡಾವಣೆಯ ಜವರೇಗೌಡನದೊಡ್ಡಿ ಹತ್ತಿರ ಉದ್ಯಾನವನ ಪ್ರದೇಶದಲ್ಲಿ ಶ್ರೀ ಮುನಿಯಪ್ಪ ಎಂಬುವರು ಅನಧಿಕೃತವಾಗಿ ಕಟ್ಟಡ ನಿರ್ಮಿಸಿದ್ದು, ಉದ್ಯಾನವನದ ತಂತಿ ಬೇಲಿ ಕಾಮಗಾರಿಯನ್ನು ಕೈಗೊಳ್ಳದಂತೆ ತಡೆಯುಂಟು ಮಾಡುತ್ತಿದ್ದರು. ಇಂದು ಸದರಿ ಪ್ರದೇಶವನ್ನು ಸ್ಥಳೀಯ ಪೊಲೀಸ್ ಹಾಗೂ ಬಿಬಿಎಂಪಿ ಯೋಜನಾ ವಿಭಾಗದ ಸಿಬ್ಬಂದಿ ನೆರವಿನಿಂದ ತೆರವುಗೊಳಿಸಲಾಯಿತು ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ವಿಭಾಗ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**